ಅ) ಧಾರವಾಡ ಬಡ ಮಕ್ಕಳು ಖಾಸಗಿ ಪ್ರೌಢ ಶಾಲೆಗಳಲ್ಲಿ ಪ್ರವೇಶ ಪಡೆಯಲು ದುಸ್ತರವಾಗಿರುವುದು ಸರ್ಕಾರವು ಗಮನಿಸಿದೆಯೇ?

ಇ) ಈ ಎಲ್ಲಾ ಸಂಗತಿಗಳನ್ವಯ ಜಿಲ್ಲಾ ಶಿಕ್ಷಣಾಧಿಕಾರಿಗಳು ಬೇಡಿರುವ ಕನ್ನಡ ಸರ್ಕಾರಿ ಪ್ರೌಢಶಾಲೆಗಳ ಬಗ್ಗೆ ವಿವರ ನೀಡುವುದು. ಅದರಂತೆ ಈ ವರ್ಷದಲ್ಲಿ ಎಷ್ಟು ಪ್ರೌಢಶಾಲೆಗಳನ್ನು ಮಂಜೂರು ಮಾಡಲಾಗುವುದು;

ಪ್ರೋ।। ಬಿ.ಕೆ. ಚಂದ್ರಶೇಖರ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು)

ಅ) ಧಾರವಾಡ ನಗರದಲ್ಲಿ ಪ್ರಸಕ್ತ ಸಾಲಿನಲ್ಲಿ ಹೊಸ ಪ್ರೌಢಶಾಲೆ ಪ್ರಾರಂಭಿಸುವ ಬಗ್ಗೆ ಪ್ರಸ್ತಾವನೆಗಳು ಬಂದಿರುವುದಿಲ್ಲ. ಆದರೆ ಧಾರವಾಡ ಜಿಲ್ಲೆಯ ಗ್ರಾಮಾಂತರ ಪ್ರದೇಶಗಳಲ್ಲಿ ಪ್ರೌಢಶಾಲೆಗಳನ್ನು ಮಂಜೂರು ಮಾಡುವ ಬಗ್ಗೆ 12 ಪ್ರಸ್ತಾವನೆಗಳು ಸರ್ಕಾರಕ್ಕೆ ಬಂದಿದ್ದು, ಪರಿಶೀಲನೆಯಲ್ಲಿದೆ.

ಆ) ಇಂತಹ ಯಾವುದೇ ದೂರುಗಳು ಸರ್ಕಾರಕ್ಕೆ ಬಂದಿರುವುದಿಲ್ಲ.

ಇ) ಜಿಲ್ಲಾ ಶಿಕ್ಷಣಾಧಿಕಾರಿಗಳಿಂದ ಈ ವರ್ಷ ಪ್ರಸ್ತಾವನೆ ಬಂದಿಲ್ಲದಿರುವುದರಿಂದ ಈ ಪ್ರಶ್ನೆ ಉದ್ಭವಿಸುವುದಿಲ್ಲ.

ಧಾರವಾಡ ಜಿಲ್ಲಾ ಕೇಂದ್ರಗಳಲ್ಲಿ ಶಸ್ತ್ರ ಚಿಕಿತ್ಸೆ ಆಸ್ಪತ್ರೆಯ ವಿವರ

1715 (2064) ಶ್ರೀ ಬೆಲ್ಲದ್ ಚಂದ್ರಕಾಂತ್ ಗುರಪ್ಪ (ಧಾರವಾಡ) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಧಾರವಾಡ ಜಿಲ್ಲಾ ಕೇಂದ್ರದಲ್ಲಿ ಇರುವ ಜಿಲ್ಲಾ ಶಸ್ತ್ರ ಚಿಕಿತ್ಸಾ ದವಾಖಾನೆಯಲ್ಲಿ ಯಾವ ತಜ್ಞರ ಕೊರತೆ ಇದೆ. ಈ ದವಾಖಾನೆಯಲ್ಲಿ ಎಷ್ಟು ಹಾಸಿಗೆಗಳು ಇವೆ ಮತ್ತು ನರ್ಸಿಂಗ್ ಸಿಬ್ಬಂದಿಯ ಸಂಖ್ಯೆ ಎಷ್ಟು (ವಿವರ ನೀಡುವುದು)

ಆ) ಸದರಿ ದವಾಖಾನೆಗೆ ಸಂದರ್ಶಕ ಸಮಿತಿ ನಗರದ ಶಾಸಕರ ಅಧ್ಯಕ್ಷತೆಯಲ್ಲಿ ಮಾಡಿ ಕಳಿಸಿರುವುದೇನೆಂದರೆ ವಿವರ ನೀಡುವುದು.

ಇ) ಮೂರು ವರ್ಷವಾದರೂ ಇದುವರೆವಿಗೂ ಸಂದರ್ಶಕರ ಸಮಿತಿ ಮಾಡದೆ ಇರುವುದರ ಕಾರಣವೇನು?

ಶ್ರೀ ಕಾಗೋಡು ತಿಮ್ಮಪ್ಪ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)

ಅ) ಮಂಜೂರಾದ ತಜ್ಞ ವೈದ್ಯರು - 16
ಕರ್ತವ್ಯ ನಿರ್ವಹಿಸುತ್ತಿರುವರು - 16
ಹಾಸಿಗೆ ಸಂಖ್ಯೆ - 250
ಶುಶ್ರೂಷಕಿ ದಾದಿ - 56

ಆ) ಈ ಬಗ್ಗೆ ಪ್ರಸ್ತಾವನೆ ಬಂದಿರುತ್ತದೆ.

ಇ) ಈ ಪ್ರಸ್ತಾವನೆಯು ಸರ್ಕಾರದ ಪರಿಶೀಲನೆಯಲ್ಲಿದೆ.

ಧಾರವಾಡದ ಆಶ್ರಯ ಸಮಿತಿ ಬಗ್ಗೆ

1717 (2093) ಶ್ರೀ ಬೆಲ್ಲದ್ ಚಂದ್ರಕಾಂತ್ ಗುರಪ್ಪ (ಧಾರವಾಡ) : ಮಾನ್ಯ ವಸತಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?